## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2041(2358)

ಸದಸ್ಯರ ಹೆಸರು : ಶ್ರೀ ಹೆಚ್.ಎಂ. ರಮೇಶ್ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 22/03/2022

ಉತ್ತರಿಸುವವರು : ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಾದ್ಯಂತ ಪಟ್ಟಣ ಪಂಚಾಯತಿ ಪುರಸಭೆ ಮತ್ತು ನಗರಸಭೆ ಅಡಿ ಬಿ ಖಾತಾ ಕೊಟ್ಟು ಕೃಷಿ ಜಮೀನುಗಳ ಭೂ ಪರಿವರ್ತನೆ ಪರವಾನಗಿ ಪಡೆಯದೇ ಬಡಾವಣೆ/ ಮನೆಗಳನ್ನು ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಇದರಿಂದ ಪಟ್ಟಣಗಳಲ್ಲಿ ಸರಿಯಾದ ನಗರಾಭಿವೃದ್ಧಿ ಯೋಜನೆ ಮತ್ತು ರೂಪುರೇಷೆ ಇಲ್ಲದ ಅನೇಕ ಬಡಾವಣೆಗಳ ನಿರ್ಮಾಣವಾಗಿ ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಬಂದಿದ್ದಲ್ಲಿ, ಹೀಗೆ ಅನಧಿಕೃತವಾಗಿ ನಿರ್ಮಾಣವಾಗುತ್ತಿರುವ ಬಡಾವಣೆಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಸಕ್ಷಮ ಪ್ರಾಧಿಕಾರಗಳಿಂದ ವಿನ್ಯಾಸ ಅನುಮೋದನೆ ಪಡೆಯದೇ ಇರುವ ನಿವೇಶನಗಳಿಗೆ ಖಾತೆಯನ್ನು ನೀಡಬಾರದೆಂದು ಸರ್ಕಾರದ ಸುತ್ತೋಲೆ ಸಂ: ನಅಇ 7 ಟಿಟಿಪಿ 2017. ದಿ:22-03-2017 ರಲ್ಲಿ ಎಲ್ಲಾ ಸ್ಥಳೀಯ ಸಂಸ್ಥೆಗಳಿಗೆ ಸೂಚನೆ ನೀಡಲಾಗಿದೆ.<br>ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನಧಿಕೃತ ಬೆಳವಣಿಗೆಗಳನ್ನು ತಡೆಗಟ್ಟುವ ಕುರಿತು ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 105 ಮೈಅಪ್ರಾ 2020 ದಿ:16.06.2020 ಮತ್ತು ನಅಇ 28 ಬೆಮಪ್ರಾ 2018 ದಿ:28.08.2019 ರಲ್ಲಿ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು, ಯೋಜನಾ ಪ್ರಾಧಿಕಾರಗಳು ತಮ್ಮ ವ್ಯಾಪ್ತಿಯಲ್ಲಿ ಅನಧಿಕೃತ ವಿನ್ಯಾಸಗಳನ್ನು ಹಾಗೂ ಮಹಾನಗರ ಪಾಲಿಕೆಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿನ ಅನಧಿಕೃತ ಕಟ್ಟಡಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ನಿಯಮಿತವಾಗಿ ಸ್ಥಳ ಪರಿಶೀಲನೆ ಕೈಗೊಳ್ಳುವಂತೆ ಹಾಗೂ ಯಾವುದಾದರು ಅನಧಿಕೃತ ಬೆಳವಣಿಗೆ ಕಂಡುಬಂದಲ್ಲಿ ಕರ್ನಾಟಕ ನಗರ ಮತ್ತು |

| | | |
|---|---|---|
| | | ಗ್ರಾಮಾಂತರ ಯೋಜನಾ ಕಾಯ್ದೆ 1961/ ಕರ್ನಾಟಕ ಮಹಾನಗರ ಪಾಲಿಕೆಗಳ ಕಾಯ್ದೆ 1976/ ಕರ್ನಾಟಕ ಮುನಿಸಿಪಲ್ ಕಾಯ್ದೆ 1964 ಅನ್ವಯ ಕಟ್ಟುನಿಟ್ಟಾಗಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. |

ಸಂಖ್ಯೆ: ನಅಇ 116 ಜಿಇಎಲ್ 2022(ಇ)

ಎನ್. ನಾಗರಾಜು (ಎಂ.ಟಿ.ಬಿ)
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು